सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

2ನೇ ಮತ್ತು 3ನೇ ಮಹಡಿ, ನಂ. 16, ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-560080

**ವಿಷಯ:** ವಿಜಯಪುರ ಜಿಲ್ಲೆ, ವಿಜಯಪುರ ತಾಲ್ಲೂಕು, ಅಲಿಯಾಬಾದ್ ಗ್ರಾಮ ಪಂಚಾಯಿತಿಯ 5-ಅಲಿಯಾಬಾದ್ ಎಲ್.ಟಿ ಕ್ಷೇತ್ರಕ್ಕೆ ಸ್ಥಗಿತಗೊಳಿಸಲಾಗಿದ್ದ ಉಪ ಚುನಾವಣಾ ಪ್ರಕ್ರಿಯೆಯನ್ನು ಮುಂದುವರಿಸುವ ಕುರಿತು.

**ಓದಲಾಗಿದೆ:**

1. ಆಯೋಗದ ಆದೇಶ ಸಂಖ್ಯೆ: ರಾಚುಆ 21 ಇಜಿಪಿ 2022, ದಿನಾಂಕ: 28.04.2022.
2. ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ಪ್ರಕರಣ W.P. No. 9505/2022ರ ಮಧ್ಯಂತರ ಆದೇಶ ದಿನಾಂಕ: 10.05.2022.
3. ಆಯೋಗದ ಆದೇಶ ಸಂಖ್ಯೆ: ರಾಚುಆ 21 ಇಜಿಪಿ 2022, ದಿನಾಂಕ: 12.05.2022.
4. ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ಪ್ರಕರಣ W.P. No. 9505/2022ರ ಅಂತಿಮ ಆದೇಶ ದಿನಾಂಕ: 13.06.2022.

**ಪ್ರಸ್ತಾವನೆ,**

ಮೇಲೆ ಓದಲಾದ(1)ರ ಆಯೋಗದ ಆದೇಶದಲ್ಲಿ ವಿಜಯಪುರ ಜಿಲ್ಲೆ, ವಿಜಯಪುರ ತಾಲ್ಲೂಕು, ಅಲಿಯಾಬಾದ್ ಗ್ರಾಮ ಪಂಚಾಯಿತಿಯ 5-ಅಲಿಯಾಬಾದ್ ಎಲ್.ಟಿ ಕ್ಷೇತ್ರಕ್ಕೆ ಉಪ ಚುನಾವಣೆ ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ಪ್ರಕರಣ ಸಂಖ್ಯೆ W.P. No. 9505/2022ಕ್ಕೆ ದಿನಾಂಕ: 10.05.2022 ರಲ್ಲಿ ನೀಡಿದ ತಡೆಯಾಜ್ಞೆ ಆದೇಶದನ್ವಯ, ವಿಜಯಪುರ ಜಿಲ್ಲೆ, ವಿಜಯಪುರ ತಾಲ್ಲೂಕು, ಅಲಿಯಾಬಾದ್ ಗ್ರಾಮ ಪಂಚಾಯಿತಿಯ 5-ಅಲಿಯಾಬಾದ್ ಎಲ್.ಟಿ ಕ್ಷೇತ್ರಕ್ಕೆ ಉಪ ಚುನಾವಣೆಗೆ ಸಂಬಂಧಿಸಿದಂತೆ, ದಿನಾಂಕ: 11.05.2022ರ ವರೆಗೆ ನಡೆದಿರುವ ಉಪ ಚುನಾವಣಾ ಪ್ರಕ್ರಿಯೆಯನ್ನು ಉಳಿಸಿಕೊಂಡಂತೆ, ಉಪ ಚುನಾವಣೆಯ ಮುಂದಿನ ಪ್ರಕ್ರಿಯೆಗಳನ್ನು ಆಯೋಗದ ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಿ ಮೇಲೆ ಓದಲಾದ (3)ರಲ್ಲಿ ಆದೇಶಿಸಲಾಗಿರುತ್ತದೆ.

ದಿನಾಂಕ: 28.04.2022 ರಂದು ಹೊರಡಿಸಿದ ಚುನಾವಣಾ ವೇಳಾಪಟ್ಟಿಯನ್ವಯ ದಿನಾಂಕ: 05.05.2022 ರಿಂದ 11.05.2022 ರವರೆಗಿನ ಚುನಾವಣಾ ಪ್ರಕಿಯೆಗಳಿಗೆ ಯಾವುದೇ ಭಾದಕವಿರುವುದಿಲ್ಲ. ದಿನಾಂಕ: 11.05.2022 ರಂದು ನಾಮಪತ್ರ ಪರಿಶೀಲನೆ ಪ್ರಕ್ರಿಯೆಯು ನಡೆದಿದ್ದು, ಮುಂದಿನ ಪ್ರಕ್ರಿಯೆಗಳು ಸ್ಥಗಿತಗೊಂಡಿರುತ್ತದೆ.

ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ಪ್ರಕರಣ ಸಂಖ್ಯೆ W.P. No. 9505/2022 ಅನ್ನು ಅರ್ಜಿದಾರರು ಹಿಂಪಡೆದ ಕಾರಣ, ದಿನಾಂಕ: 13.06.2022 ರಂದು ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಲಾಗಿರುವುದರಿಂದ ಮುಂದಿನ ಚುನಾವಣಾ ಪ್ರಕ್ರಿಯೆಗಳನ್ನು ನಡೆಸಲು ಯಾವುದೇ ಬಾದಕವಿರುವುದಿಲ್ಲ. ಆದ್ದರಿಂದ ಮುಂದಿನ ಚುನಾವಣಾ ಪ್ರಕ್ರಿಯೆಗಳನ್ನು ನಡೆಸಲು ಈ ಕೆಳಕಂಡಂತೆ ಆದೇಶಿಸಿದೆ.

**ರಾಜ್ಯ ಚುನಾವಣಾ ಆಯೋಗದ ಆದೇಶ, ಸಂಖ್ಯೆ: ರಾಚುಆ 21 ಇಜಿಪಿ 2022,**
**ಬೆಂಗಳೂರು, ದಿನಾಂಕ: 23.06.2022.**

ಭಾರತ ಸಂವಿಧಾನದ ಪರಿಚ್ಛೇದ 243ಕೆ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 308ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ವಿಜಯಪುರ ಜಿಲ್ಲೆ, ವಿಜಯಪುರ ತಾಲ್ಲೂಕು, ಅಲಿಯಾಬಾದ್ ಗ್ರಾಮ ಪಂಚಾಯಿತಿಯ 5-ಅಲಿಯಾಬಾದ್ ಎಲ್.ಟಿ ಕ್ಷೇತ್ರಕ್ಕೆ ಉಪ ಚುನಾವಣೆಯನ್ನು ನಡೆಸಲು ಈ ಕೆಳಕಂಡಂತೆ ವೇಳಾಪಟ್ಟಿಯನ್ನು ನಿಗದಿಪಡಿಸಿ, ಅದರಂತೆ ಚುನಾವಣೆಯನ್ನು ಮುಂದುವರೆಸಲು ಆದೇಶಿಸಿದೆ. ಸದರಿ ಆದೇಶವು ದಿನಾಂಕ:05.05.2022 ರಿಂದ 11.05.2022ರ ವರೆಗೆ ನಡೆದಿರುವ ಚುನಾವಣಾ ಪ್ರಕ್ರಿಯೆಯ ಭಾಗವಾಗಿರುತ್ತದೆ.

**ಮುಂದುವರೆದ ಚುನಾವಣಾ ವೇಳಾಪಟ್ಟಿ**

| | | |
|---|---|---|
| 1 | ಜಿಲ್ಲಾಧಿಕಾರಿಗಳು ಮುಂದುವರೆಸಿದ ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 27.06.2022 (ಸೋಮವಾರ) |
| 2 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 28.06.2022 (ಮಂಗಳವಾರ) |
| 3 | ಮತದಾನ ಅವಶ್ಯಕವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಗಳ ವರೆಗೆ) | **04.07.2022 (ಸೋಮವಾರ)** |
| 4 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 06.07.2022 (ಬುಧವಾರ) |
| 5 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 06.07.2022 (ಬುಧವಾರ) |

ಜಿಲ್ಲಾಧಿಕಾರಿಗಳು, ಆಯೋಗವು ಆದೇಶಿಸಿರುವ ಮೇಲ್ಕಂಡ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993ರ ನಿಯಮ 12ರ ಅಡಿಯಲ್ಲಿ ಚುನಾವಣಾ ಅಧಿಸೂಚನೆಯನ್ನು ಹೊರಡಿಸತಕ್ಕದ್ದು ಹಾಗೂ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿಸಿದ ಅಧಿಸೂಚನೆ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಕಛೇರಿಯ ಸೂಚನಾ ಫಲಕದ ಮೇಲೆ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲೂ ಸಹ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಫ್ಯಾಕ್ಸ್/ಇ-ಮೇಲ್ ಮುಖಾಂತರ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಅಂದೇ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು, ಅದೇ ದಿನದಂದು ಚುನಾವಣಾಧಿಕಾರಿಗಳು ಪ್ರಪತ್ರ-3 ರಲ್ಲಿ ಚುನಾವಣಾ ನೋಟೀಸನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿ, ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು ಹಾಗೂ ಚುನಾವಣಾ ನೋಟೀಸಿನಲ್ಲಿ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿ ಹೆಸರು, ಕ್ಷೇತ್ರದ ಹೆಸರು, ಸದಸ್ಯ ಸ್ಥಾನಗಳ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ಎಸಿ ರಂತೆ **ಚುನಾವಣಾ ನೀತಿ ಸಂಹಿತೆಯು ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ದಿನಾಂಕ: 27.06.2022 ರಿಂದ ದಿನಾಂಕ: 06.07.2022ರ ವರೆಗೆ** ಜಾರಿಯಲ್ಲಿರುತ್ತದೆ.

ಸದರಿ ಗ್ರಾಮ ಪಂಚಾಯಿತಿಯ ಕ್ಷೇತ್ರದಲ್ಲಿ ಅಭ್ಯರ್ಥಿಗಳ ನಾಮಪತ್ರ ಹಿಂತೆಗೆತ ಕಾರಣದಿಂದ ಯಾವುದೇ ಅಭ್ಯರ್ಥಿಯು ಕಣದಲ್ಲಿರದೆ ಆ ಗ್ರಾಮ ಪಂಚಾಯಿತಿಯ ಸ್ಥಾನಕ್ಕೆ ಚುನಾವಣೆ ನಡೆಯದೇ ಇದ್ದಲ್ಲಿ ಅಥವಾ ಗ್ರಾಮ ಪಂಚಾಯಿತಿಯಲ್ಲಿನ ಚುನಾವಣೆ ಘೋಷಿಸಿರುವ ಸ್ಥಾನಗಳೂ ಅವಿರೋಧವಾಗಿ ಆಯ್ಕೆಯಾಗಿದ್ದು, ಆಯ್ಕೆಯಾದ ಅಭ್ಯರ್ಥಿಯ ಫಲಿತಾಂಶವನ್ನು ಚುನಾವಣಾಧಿಕಾರಿಯು ಘೋಷಿಸಿದ್ದಲ್ಲಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುವುದು ತಕ್ಷಣದಿಂದ ರದ್ದಾಗುತ್ತದೆ.

**ವಿಶೇಷ ಸೂಚನೆ :**

ದಿನಾಂಕ: 28.04.2022ರ ಆದೇಶದಲ್ಲಿ ನೀಡಿರುವ ಸೂಚನೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಆದೇಶಾನುಸಾರ

(ಎನ್. ಆರ್. ನಾಗರಾಜು)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
23/6/22

ರವರಿಗೆ,

ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ, ವಿಜಯಪುರ